All India Radio: Bangalore
National Bulletin In Kannada
30.06.2026 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

---

ಮುಖ್ಯಾಂಶಗಳು

೧. ಪೆಟ್ರೋಲ್-ಡೀಸೆಲ್ ಮಾರಾಟದ ಮೇಲಿನ ತಾತ್ಕಾಲಿಕ ನಿರ್ಬಂಧಗಳನ್ನು ನಾಳೆಯಿಂದ ಹಿಂಪಡೆಯಲು ಕೇಂದ್ರ ಸರ್ಕಾರ ನಿರ್ಧಾರ

೨. ಎರಡು ದಿನಗಳ ಪ್ರವಾಸಕ್ಕಾಗಿ ಇಂದು ಆಂಧ್ರಪ್ರದೇಶಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ

೩. ಚಲನಚಿತ್ರ ರಂಗದ ಉತ್ತೇಜನಕ್ಕೆ ಕೇಂದ್ರ ಸರ್ಕಾರದಿಂದ ಎರಡು ಪ್ರಮುಖ ನಿರ್ಧಾರ: ಪ್ರಸಾರ ಭಾರತಿ ಅಧ್ಯಕ್ಷರ ನೇತೃತ್ವದಲ್ಲಿ ಅಧ್ಯಯನ ಗುಂಪು ರಚನೆ

೪. ಹಾರ್ಮುಜ್ ಜಲಸಂಧಿ ವಿವಾದ: ದೋಹಾದಲ್ಲಿ ಇಂದು ಅಮೆರಿಕ-ಇರಾನ್ ಮಾತುಕತೆ

೫. ಫಿಫಾ ವಿಶ್ವಕಪ್: ಇಂಜುರಿ ಟೈಮ್ ಗೋಲ್ ಮೂಲಕ ಬ್ರೆಜಿಲ್‌ಗೆ ಜಯ; ಪೆನಾಲ್ಟಿ ಶೂಟೌಟ್‌ನಲ್ಲಿ ಜರ್ಮನಿಗೆ ಸೋಲು

---

ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಮಾರಾಟ ಹಾಗೂ ವಿತರಣೆಯನ್ನು ನಿಯಂತ್ರಿಸಲು ವಿಧಿಸಲಾಗಿದ್ದ ತಾತ್ಕಾಲಿಕ ನಿಯಂತ್ರಣ ಕ್ರಮಗಳನ್ನು ನಾಳೆಯಿಂದ ಜಾರಿಗೆ ಬರುವಂತೆ ಸಂಪೂರ್ಣವಾಗಿ ಹಿಂಪಡೆಯಲು ಕೇಂದ್ರ ಸರ್ಕಾರ ನಿರ್ಧರಿಸಿದೆ.

ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದಾಗಿ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಇಂಧನ ಬೆಲೆಗಳು ತೀವ್ರ ಏರಿಕೆಯಾಗಿದ್ದ ಸಂದರ್ಭದಲ್ಲಿ, ಚಿಲ್ಲರೆ ಗ್ರಾಹಕರನ್ನು ರಕ್ಷಿಸಲು ಮತ್ತು ಇಂಧನ ಕಾಳಸಂತೆ ಹಾಗೂ ಅಕ್ರಮ ದಾಸ್ತಾನನ್ನು ತಡೆಯಲು ಜೂನ್ ೧೨ ರಂದು ಈ ನಿಯಂತ್ರಣ ಕ್ರಮಗಳನ್ನು ಜಾರಿಗೆ ತರಲಾಗಿತ್ತು. ಇದರ ಅನ್ವಯ ಪೆಟ್ರೋಲ್ ಬಂಕ್‌ಗಳಲ್ಲಿ ಪ್ರತಿ ವಾಹನಕ್ಕೆ ದಿನಕ್ಕೆ ಗರಿಷ್ಠ ೨೦೦ ಲೀಟರ್ ಡೀಸೆಲ್ ಮಿತಿಯನ್ನು ಹೇರಲಾಗಿತ್ತು.

ಪ್ರಸ್ತುತ ದೇಶದಲ್ಲಿ ಪೆಟ್ರೋಲಿಯಂ ಉತ್ಪನ್ನಗಳ ಪೂರೈಕೆ ಸ್ಥಿತಿಗತಿಯು ಸಂಪೂರ್ಣವಾಗಿ ಸುಧಾರಿಸಿ, ಯಥಾಸ್ಥಿತಿಗೆ ಮರಳಿರುವುದರಿಂದ ಇನ್ನು ಮುಂದೆ ಸಾರ್ವಜನಿಕ ಹಿತದೃಷ್ಟಿಯಿಂದ ಈ ತಾತ್ಕಾಲಿಕ

ನಿರ್ಬಂಧಗಳ ಅಗತ್ಯವಿಲ್ಲ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ. ಈ ನಿಯಮಗಳು ಇಂಧನ ಕೊರತೆಯಾಗದಂತೆ ನೋಡಿಕೊಳ್ಳುವಲ್ಲಿ ಹಾಗೂ ಚಿಲ್ಲರೆ ಗ್ರಾಹಕರ ಹಿತಾಸಕ್ತಿ ಕಾಯುವಲ್ಲಿ ಯಶಸ್ವಿಯಾಗಿದ್ದವು ಎಂದು ಸಚಿವಾಲಯ ತಿಳಿಸಿದೆ.

---

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಎರಡು ದಿನಗಳ ಆಂಧ್ರಪ್ರದೇಶ ಪ್ರವಾಸ ಕೈಗೊಳ್ಳಲಿದ್ದಾರೆ.

ರಾಷ್ಟ್ರಪತಿಗಳು ಇಂದು ವಿಜಯನಗರಂನಲ್ಲಿ ಆಂಧ್ರಪ್ರದೇಶದ ಕೇಂದ್ರೀಯ ಬುಡಕಟ್ಟು ವಿಶ್ವವಿದ್ಯಾಲಯದ ಮೊದಲ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ನಾಳೆ ಅವರು, ಅನಂತಪುರಮುನಲ್ಲಿ ಆಂಧ್ರಪ್ರದೇಶದ ಕೇಂದ್ರೀಯ ವಿಶ್ವವಿದ್ಯಾಲಯದ ಮೊದಲ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

---

ಭಾರತೀಯ ಚಿತ್ರರಂಗಕ್ಕೆ ಜಾಗತಿಕ ಮಟ್ಟದಲ್ಲಿ ಹೊಸ ಶಕ್ತಿ ತುಂಬುವ ನಿಟ್ಟಿನಲ್ಲಿ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯವು ಎರಡು ಪ್ರಮುಖ ನಿರ್ಧಾರಗಳನ್ನು ಪ್ರಕಟಿಸಿದೆ.

ನವದೆಹಲಿಯಲ್ಲಿ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಪರಿಶೀಲನಾ ಸಭೆಯಲ್ಲಿ ಈ ತೀರ್ಮಾನಗಳನ್ನು ತೆಗೆದುಕೊಳ್ಳಲಾಗಿದೆ.

ಚಲನಚಿತ್ರ ನಿರ್ಮಾಣವನ್ನು ಉತ್ತೇಜಿಸುವುದು, ವಿತರಣಾ ಜಾಲವನ್ನು ಬಲಪಡಿಸುವುದು ಹಾಗೂ ಭಾರತೀಯ ಸಿನಿಮಾದಲ್ಲಿ ಉದಯೋನ್ಮುಖ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವ ಕುರಿತು ಸಭೆಯಲ್ಲಿ ಪ್ರಮುಖವಾಗಿ ಚರ್ಚಿಸಲಾಗಿದ್ದು, ಸಣ್ಣ ನಗರಗಳು ಮತ್ತು ಗ್ರಾಮೀಣ ಭಾಗಗಳಲ್ಲಿ ಚಿತ್ರಮಂದಿರಗಳ ಮೂಲಸೌಕರ್ಯ ಅಭಿವೃದ್ಧಿಗೆ ಬಂಡವಾಳ ಹೂಡಿಕೆಯನ್ನು ಪ್ರೋತ್ಸಾಹಿಸುವುದು ಇದರ ಮುಖ್ಯ ಉದ್ದೇಶವಾಗಿದೆ.

ಈ ಯೋಜನೆಯಡಿ ಭಾರತೀಯ ಚಿತ್ರರಂಗದ ಮುಂದಿರುವ ಸವಾಲುಗಳು ಮತ್ತು ಅವಕಾಶಗಳನ್ನು ಸಮಗ್ರವಾಗಿ ಅಧ್ಯಯನ ಮಾಡಲು ಪ್ರಸಾರ ಭಾರತಿ ಅಧ್ಯಕ್ಷ ಪ್ರಸೂನ್ ಜೋಶಿ ಅವರ ನೇತೃತ್ವದಲ್ಲಿ ಉನ್ನತ ಮಟ್ಟದ 'ಅಧ್ಯಯನ ಗುಂಪು' ರಚಿಸಲಾಗಿದೆ. ಇದರೊಂದಿಗೆ,

ಇದರ ಜೊತೆಗೆ, ದೇಶಾದ್ಯಂತ ಚಿತ್ರರಂಗಕ್ಕೆ ಪೂರಕವಾದ ಏಕರೂಪದ ವಾತಾವರಣ ನಿರ್ಮಿಸಲು ಸಚಿವಾಲಯವು 'ಮಾದರಿ ರಾಜ್ಯ ಚಲನಚಿತ್ರ ನಿಯಮಾವಳಿಗಳನ್ನು ಸಿದ್ಧಪಡಿಸಿದ್ದು, ಅವುಗಳನ್ನು ಅಳವಡಿಸಿಕೊಳ್ಳುವಂತೆ ಎಲ್ಲಾ ರಾಜ್ಯ ಸರ್ಕಾರಗಳಿಗೆ ಸೂಚಿಸಿದೆ. ಈ ಸುಧಾರಣಾ ಕ್ರಮಗಳು ಭಾರತೀಯ ಸಿನಿಮಾವನ್ನು ಜಾಗತಿಕ ಮಟ್ಟದಲ್ಲಿ ಮತ್ತಷ್ಟು ಸ್ಪರ್ಧಾತ್ಮಕವಾಗಿಸಲು ಸಹಕಾರಿಯಾಗಲಿವೆ ಎಂದು ಸಚಿವಾಲಯ ತಿಳಿಸಿದೆ.

---

ಗ್ರಾಮಗಳು ಸಮೃದ್ಧ, ಸ್ವಾವಲಂಬಿ ಮತ್ತು ಅಭಿವೃದ್ಧಿ ಹೊಂದದ ಹೊರತು ಸಮೃದ್ಧ ಹಾಗೂ ವಿಕಸಿತ ಭಾರತದ ಕನಸು ನನಸಾಗುವುದಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಿನ್ನೆ ನಡೆದ ಎರಡು ದಿನಗಳ ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಗ್ರಾಮಗಳು ಕೇವಲ ಅಭಿವೃದ್ಧಿಯ ಫಲಾನುಭವಿಗಳಲ್ಲ, ಅಭಿವೃದ್ಧಿಯ ಪ್ರಮುಖ ಚಾಲಕ ಶಕ್ತಿಗಳಾಗಿವೆ ಎಂದು ಹೇಳಿದರು.

ಇದೇ ವೇಳೆ, 'ವಿಕಸಿತ ಭಾರತ್ - ಜಿ ರಾಮ್ ಜಿ ಯೋಜನೆಯನ್ನು ನಾಳೆಯಿಂದ ದೇಶಾದ್ಯಂತ ಜಾರಿಗೆ ತರಲಾಗುವುದು ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಘೋಷಿಸಿದರು.

---

ಚೀನಾದ ಪೀಪಲ್ಸ್ ಲಿಬರೇಶನ್ ಆರ್ಮಿ-ಪಿಎಲ್ಎ ಇತ್ತೀಚೆಗೆ ಅರುಣಾಚಲ ಪ್ರದೇಶವನ್ನು ಅತಿಕ್ರಮಿಸಿ ಶಿಬಿರಗಳನ್ನು ಸ್ಥಾಪಿಸಿದೆ ಎಂಬ ಮಾಧ್ಯಮ ವರದಿಗಳನ್ನು ಭಾರತೀಯ ಸೇನೆ ತಳ್ಳಿಹಾಕಿದೆ.

ಅಂತಹ ವರದಿಗಳು ತಪ್ಪಾಗಿದ್ದು, ಆಧಾರ ರಹಿತವಾಗಿದೆ ಎಂದು ಸೇನೆ ತಿಳಿಸಿದೆ.

---

ಕಾನೂನಿನ ಆಡಳಿತವು ಯಾವುದೇ ಕಲ್ಯಾಣ ಯೋಜನೆಯಲ್ಲ ಅಥವಾ ಆರ್ಥಿಕ ನೀತಿಯಲ್ಲ, ಬದಲಿಗೆ ಅದು ಸರ್ಕಾರದ ಅಧಿಕಾರದ ಬಳಕೆಯನ್ನು ನಿಯಂತ್ರಿಸುವ ಶಕ್ತಿಯಾಗಿದೆ ಎಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಪ್ರತಿಪಾದಿಸಿದ್ದಾರೆ.

ಸ್ಟಾಕ್‌ಹೋಮ್‌ನಲ್ಲಿ ನಡೆದ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಭಾಷಣ ಮಾಡಿದ ಅವರು, ನ್ಯಾಯಾಂಗ ವಿಮರ್ಶೆಯು ಕೇವಲ ಅಧಿಕಾರವಲ್ಲ, ಅದು ನ್ಯಾಯಾಲಯಗಳ ಸಾಂವಿಧಾನಿಕ ಕರ್ತವ್ಯವಾಗಿದೆ ಎಂದರು.

---

ಜಾಗತಿಕ ತೈಲ ಸಾಗಣೆಯ ಪ್ರಮುಖ ಮಾರ್ಗವಾದ 'ಹಾರ್ಮುಜ್ ಜಲಸಂಧಿ' ವಿವಾದಕ್ಕೆ ಸಂಬಂಧಿಸಿದಂತೆ ಅಮೆರಿಕ ಮತ್ತು ಇರಾನ್ ರಾಷ್ಟ್ರಗಳು ಇಂದು ಕತಾರ್ ರಾಜಧಾನಿ ದೋಹಾದಲ್ಲಿ ಸಂಧಾನ ಮಾತುಕತೆ ನಡೆಸಲಿವೆ.

ಕಳೆದ ಗುರುವಾರದಿಂದ ಉಭಯ ದೇಶಗಳ ನಡುವೆ ನಡೆದ ಕ್ಷಿಪಣಿ ದಾಳಿಗಳು ಜಾಗತಿಕ ತೈಲ ವ್ಯಾಪಾರವನ್ನು ಅಸ್ತವ್ಯಸ್ತಗೊಳಿಸಿದ್ದವು. ಆದರೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಂಘರ್ಷ ತೀವ್ರಗೊಳಿಸುವ ಎಚ್ಚರಿಕೆ ನೀಡಿದ ಬೆನ್ನಲ್ಲೇ, ನಿನ್ನೆ ಉಭಯ ದೇಶಗಳು ತಾತ್ಕಾಲಿಕ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ.

ಇದೇ ತಿಂಗಳ ಆರಂಭದಲ್ಲಿ ಸಹಿ ಹಾಕಲಾಗಿದ್ದ ಒಪ್ಪಂದದ 'ಆರ್ಟಿಕಲ್ ೫' ನೌಕಾಯಾನ ನಿಯಮ ಕುರಿತಾದ ಭಿನ್ನಾಭಿಪ್ರಾಯಗಳೇ ಇತ್ತೀಚಿನ ಸಂಘರ್ಷಕ್ಕೆ ಕಾರಣವಾಗಿವೆ. ಒಪ್ಪಂದದ ಪ್ರಕಾರ, ವಾಣಿಜ್ಯ ಹಡಗುಗಳ ಸುರಕ್ಷಿತ ಸಂಚಾರಕ್ಕೆ ಇರಾನ್ ಸಹಕರಿಸಬೇಕಿತ್ತು ಮತ್ತು ಅಮೆರಿಕವು ಇರಾನ್ ಬಂದರುಗಳ ಮೇಲಿನ ದಿಗ್ಬಂಧನ ತೆರವುಗೊಳಿಸಬೇಕಿತ್ತು.

---

ಜುಲೈ ೩ರಿಂದ ಆರಂಭವಾಗುವ ೫೭ ದಿನಗಳ ವಾರ್ಷಿಕ ಅಮರನಾಥ ಯಾತ್ರೆಗೆ ಮುಂಚಿತವಾಗಿ, ಭದ್ರತಾ ಸಂಸ್ಥೆಗಳು ಪಂಜಾಬ್‌ನಿಂದ ಜಮ್ಮು ಮತ್ತು ಕಾಶ್ಮೀರಕ್ಕೆ ತೀರ್ಥಯಾತ್ರೆ ಮಾರ್ಗದಾದ್ಯಂತ ಸಿದ್ಧತೆಗಳನ್ನು ತೀವ್ರಗೊಳಿಸಿದ್ದು, ಅಣಕು ಪ್ರದರ್ಶನಗಳನ್ನು ನಡೆಸುತ್ತಿವೆ.

ಕಣ್ಗಾವಲು ವ್ಯವಸ್ಥೆಗಳನ್ನು ಸಕ್ರಿಯಗೊಳಿಸುತ್ತಿದ್ದು, ಸಾವಿರಾರು ಯಾತ್ರಿಕರ ಸುರಕ್ಷಿತ ಯಾತ್ರೆಯನ್ನು ಖಚಿತಪಡಿಸಿಕೊಳ್ಳಲು ಅಂತರ-ಸಂಸ್ಥೆ ಸಮನ್ವಯವನ್ನು ಬಲಪಡಿಸಲಾಗುತ್ತಿವೆ.

ಜಮ್ಮು ಮತ್ತು ಕಾಶ್ಮೀರಕ್ಕೆ ಯಾತ್ರಾರ್ಥಿಗಳ ಮೊದಲ ತಂಡ ಆಗಮಿಸಲು ಪ್ರಾರಂಭಿಸಿದೆ.

ಜಮ್ಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿ, ಸಾರಿಗೆ ಶಿಬಿರಗಳು ಮತ್ತು ಪವಿತ್ರ ಗುಹಾ ದೇವಾಲಯಕ್ಕೆ ಹೋಗುವ ಅವಳಿ ಮಾರ್ಗಗಳಲ್ಲಿ ವ್ಯಾಪಕ ವ್ಯವಸ್ಥೆಗಳೊಂದಿಗೆ ಭದ್ರತಾ ಪಡೆಗಳು ಹೆಚ್ಚಿನ ನಿಗಾ ವಹಿಸಿವೆ.

---

ಪಶ್ಚಿಮ ಬಂಗಾಳ ಸರ್ಕಾರ ರಾಜ್ಯದಲ್ಲಿ ಏಕರೂಪ ನಾಗರಿಕ ಸಂಹಿತೆ ಯುಸಿಸಿ ಜಾರಿಗೆ ತರಲು ನಿರ್ಧರಿಸಿದೆ.

ಜುಲೈ ೨ ರಂದು ನಡೆಯಲಿರುವ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಮಸೂದೆಯ ಕರಡು ಪ್ರಸ್ತಾವನೆಯನ್ನು ಮಂಡಿಸಲಾಗುವುದು ಎಂದು ಮುಖ್ಯಮಂತ್ರಿ ಸುವೇಂದು ಅಧಿಕಾರಿ ವಿಧಾನಸಭೆಯಲ್ಲಿ ಘೋಷಿಸಿದರು.

ಗುಜರಾತ್, ಉತ್ತರಾಖಂಡ ಮತ್ತು ಅಸ್ಸಾಂ ಮಾದರಿಗಳನ್ನು ಅನುಸರಿಸಿ, ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಾಧೀಶೆ ನ್ಯಾಯಮೂರ್ತಿ ರಂಜನಾ ದೇಸಾಯಿ ಅವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಲಾಗಿದೆ. ಸಮಿತಿಯು ಮದುವೆ, ವಿಚ್ಛೇದನ ಮತ್ತು ದತ್ತು ಸೇರಿದಂತೆ ಒಟ್ಟು ಒಂಬತ್ತು ವಿಷಯಗಳ ಕುರಿತು ಅಧ್ಯಯನ ನಡೆಸಿ ನಾಲ್ಕು ವಾರಗಳಲ್ಲಿ ತನ್ನ ವರದಿಯನ್ನು ಸಲ್ಲಿಸಲಿದೆ ಎಂದು ಮುಖ್ಯಮಂತ್ರಿ ಹೇಳಿದರು. ಅದರ ಆಧಾರದ ಮೇಲೆ ರಾಜ್ಯ ಸರ್ಕಾರವು ಸಂಹಿತೆಯನ್ನು ರೂಪಿಸಲಿದೆ. ಆದರೆ, ಆದಿವಾಸಿಗಳು, ಕುರ್ಮಿಗಳು ಮತ್ತು ಪ್ರಾಚೀನ ಸ್ಥಳೀಯ ಸಮುದಾಯಗಳನ್ನು ಈ ಕಾನೂನಿನ ವ್ಯಾಪ್ತಿಯಿಂದ ಹೊರಗಿಡಲಾಗುತ್ತದೆ ಎಂದು ಅವರು ಸ್ಪಷ್ಟಪಡಿಸಿದರು.

---

ಅಫ್ಘಾನಿಸ್ತಾನದ ನಾಗರಿಕ ವಾಸಸ್ಥಳಗಳ ಮೇಲೆ ಪಾಕಿಸ್ತಾನ ನಡೆಸಿರುವ ವಾಯುದಾಳಿಯನ್ನು ಭಾರತ ತೀವ್ರವಾಗಿ ಖಂಡಿಸಿದೆ.

ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ೩೬ ನಾಗರಿಕರ ಸಾವು ಹಾಗೂ ೧೬೩ ಜನರು ಗಾಯಗೊಳ್ಳಲು ಕಾರಣವಾಗಿರುವ ಪಾಕಿಸ್ತಾನದ ಈ ಕ್ರಮವು ಅಫ್ಘಾನಿಸ್ತಾನದ ಸಾರ್ವಭೌಮತ್ವದ ಮೇಲಿನ ದಾಳಿಯಾಗಿದ್ದು, ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಗೆ ಆತಂಕವನ್ನುಂಟು ಮಾಡಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

---

ಅಮೆರಿಕದ ಟೆಕ್ಸಾಸ್‌ನ ಹ್ಯೂಸ್ಟನ್ ಕ್ರೀಡಾಂಗಣದಲ್ಲಿ ನಡೆದ ಫಿಫಾ ವಿಶ್ವಕಪ್‌ನ ರೋಚಕ ೩೨ರ ಘಟ್ಟದ ಪಂದ್ಯದಲ್ಲಿ, ಗೇಬ್ರಿಯಲ್ ಮಾರ್ಟಿನೆಲ್ಲಿ ಪಂದ್ಯದ ಕೊನೆಯ ಇಂಜುರಿ ಅವಧಿಯಲ್ಲಿ ಗಳಿಸಿದ ಗೋಲಿನ ನೆರವಿನಿಂದ ಐದು ಬಾರಿಯ ಚಾಂಪಿಯನ್ ಬ್ರೆಜಿಲ್ ತಂಡವು ಜಪಾನ್ ವಿರುದ್ಧ ೨-೧ ಗೋಲುಗಳ ಅಂತರದಿಂದ ರೋಚಕ ಜಯ ಸಾಧಿಸಿದೆ.

ಮತ್ತೊಂದು ಪಂದ್ಯದಲ್ಲಿ ಮಾಜಿ ಚಾಂಪಿಯನ್ ಜರ್ಮನಿ ಟೂರ್ನಿಯಿಂದ ಹೊರಬೀಳುವ ಮೂಲಕ ಆಘಾತ ಎದುರಿಸಿದೆ. ಬಾಸ್ಟನ್ ಕ್ರೀಡಾಂಗಣದಲ್ಲಿ ನಡೆದ ಜರ್ಮನಿ ಮತ್ತು ಪರಾಗ್ವೆ ನಡುವಿನ ಹಣಾಹಣಿಯು ನಿಗದಿತ ಅವಧಿಯಲ್ಲಿ ೧-೧ ಗೋಲುಗಳಿಂದ ಸಮಬಲಗೊಂಡಿದ್ದರಿಂದ ಪಂದ್ಯದ ನಿರ್ಣಯಕ್ಕಾಗಿ ಪೆನಾಲ್ಟಿ ಶೂಟೌಟ್ ನಡೆಸಲಾಯಿತು. ತೀವ್ರ ಕುತೂಹಲ ಕೆರಳಿಸಿದ್ದ ಶೂಟೌಟ್‌ನಲ್ಲಿ ಪರಾಗ್ವೆ ತಂಡ ೪-೩ ಗೋಲುಗಳ ಅಂತರದಿಂದ ಐತಿಹಾಸಿಕ ಜಯ ದಾಖಲಿಸಿತು.

---